# All India Radio: Bangalore
# National Bulletin In Kannada
# 14.04.2026 19.35 hrs

## ಆಕಾಶವಾಣಿ, ಬೆಂಗಳೂರು

## ರಾಷ್ಟ್ರೀಯ ವಾರ್ತೆಗಳು

**ಮುಖ್ಯಾಂಶಗಳು**

1. **ಬಿಹಾರ ಮುಖ್ಯಮಂತ್ರಿ ಸ್ಥಾನಕ್ಕೆ ನಿತೀಶ್ ಕುಮಾರ್ ರಾಜೀನಾಮೆ; ಎನ್‌ಡಿಎ ಶಾಸಕಾಂಗ ಪಕ್ಷದ ನಾಯಕರಾಗಿ ಉಪಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಆಯ್ಕೆ**
2. **ಹನ್ನೆರಡು ಸಾವಿರ ಕೋಟಿ ರೂಪಾಯಿ ವೆಚ್ಚದ ದೆಹಲಿ–ಡೆಹ್ರಾಡೂನ್ ಆರ್ಥಿಕ ಕಾರಿಡಾರ್ ಉದ್ಘಾಟಿಸಿದ ಪ್ರಧಾನಿ ನರೇಂದ್ರ ಮೋದಿ**
3. **ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ; ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರ ಶುಭಾಶಯ**
4. **ಐಪಿಎಲ್ ಟಿ–20 ಕ್ರಿಕೆಟ್: ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ಟಾಸ್ ಗೆದ್ದ ಕೊಲ್ಕತ್ತಾ ನೈಟ್ ರೈಡರ್ಸ್ ಫೀಲ್ಡಿಂಗ್ ಆಯ್ಕೆ**

***************

ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಇಂದು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ರಾಜಭವನದಲ್ಲಿ ರಾಜ್ಯಪಾಲ ನಿವೃತ್ತ ಲೆಫ್ಟಿನೆಂಟ್ ಜನರಲ್ ಸೈಯದ್ ಅತಾ ಹಸ್ನೈನ್ ಅವರನ್ನು ಭೇಟಿಯಾದ ನಿತೀಶ್ ಕುಮಾರ್ ಅಧಿಕೃತವಾಗಿ ರಾಜೀನಾಮೆ ಪತ್ರ ಸಲ್ಲಿಸಿದ್ದಾರೆ.

ರಾಜೀನಾಮೆಯನ್ನು ಅಂಗೀಕರಿಸಿದ ರಾಜ್ಯಪಾಲರು, ನೂತನ ಸರ್ಕಾರ ರಚನೆಯಾಗುವವರೆಗೂ ಹಂಗಾಮಿ ಮುಖ್ಯಮಂತ್ರಿಯಾಗಿ ಮುಂದುವರೆಯುವಂತೆ ಸೂಚಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ನಿತೀಶ್ ಕುಮಾರ್ ಈ ವಿಷಯವನ್ನು ಹಂಚಿಕೊಂಡಿದ್ದು, ಬಿಹಾರದಲ್ಲಿ ಶೀಘ್ರವೇ ನೂತನ ಸರ್ಕಾರ ಅಸ್ತಿತ್ವಕ್ಕೆ ಬರಲಿದೆ. ನೂತನ ಸರ್ಕಾರಕ್ಕೆ ತಮ್ಮ ಸಂಪೂರ್ಣ ಬೆಂಬಲ ಮತ್ತು ಮಾರ್ಗದರ್ಶನ ಇರುವುದಾಗಿ ತಿಳಿಸಿದ್ದಾರೆ. ಇದೇ ವೇಳೆ, ಬಿಹಾರದ ಅಭಿವೃದ್ಧಿಗಾಗಿ ಕೈಜೋಡಿಸಿದ್ದಕ್ಕಾಗಿ ರಾಜ್ಯದ ಜನತೆಗೆ ಅವರು ಕೃತಜ್ಞತೆ ಸಲ್ಲಿಸಿದ್ದಾರೆ.

***************

ಬಿಹಾರದಲ್ಲಿ ಎನ್‌ಡಿಎ ಶಾಸಕಾಂಗ ಪಕ್ಷದ ನಾಯಕರಾಗಿ ಉಪಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಆಯ್ಕೆಯಾಗಿದ್ದಾರೆ. ಈ ಮೂಲಕ ಅವರು ಬಿಹಾರದ ಮುಂದಿನ ಮುಖ್ಯಮಂತ್ರಿಯಾಗಲು ದಾರಿ ಮಾಡಿಕೊಡಲಾಗಿದೆ. ಪಾಟ್ನಾದಲ್ಲಿ ನಡೆದ ಎನ್‌ಡಿಎ ಶಾಸಕಾಂಗ ಪಕ್ಷದ ಸಭೆಯ ನಂತರ ಈ ಘೋಷಣೆ ಮಾಡಲಾಯಿತು.

ಕೇಂದ್ರ ವೀಕ್ಷಕರಾಗಿ ನೇಮಕಗೊಂಡ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಸಮ್ಮುಖದಲ್ಲಿ ಸಾಮ್ರಾಟ್ ಚೌಧರಿಯನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ನಿತೀಶ್ ಕುಮಾರ್ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿ, ತಮ್ಮ ಸಚಿವ ಸಂಪುಟವನ್ನು ವಿಸರ್ಜಿಸಿದ ನಂತರ ಈ ಬೆಳವಣಿಗೆ ನಡೆದಿದೆ. ಸಾಮ್ರಾಟ್ ಚೌಧರಿ ಅವರು ತಾರಾಪುರ ಕ್ಷೇತ್ರದ ಶಾಸಕರಾಗಿದ್ದಾರೆ. ಇದೇ ವೇಳೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಬಿಹಾರವನ್ನು ಅಭಿವೃದ್ಧಿಯತ್ತ ಕೊಂಡೊಯ್ಯಲು ಶ್ರಮಿಸುವುದಾಗಿ ಹೇಳಿದ್ದಾರೆ.

***************

12 ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಉತ್ತರಾಖಂಡದ ಡೆಹ್ರಾಡೂನ್‌ನಲ್ಲಿ ನಿರ್ಮಾಣವಾಗಿರುವ 213 ಕಿಲೋ ಮೀಟರ್ ಉದ್ದದ ಆರು ಪಥಗಳ ಪ್ರವೇಶ ನಿಯಂತ್ರಿತ ದೆಹಲಿ–ಡೆಹ್ರಾಡೂನ್ ಆರ್ಥಿಕ ಕಾರಿಡಾರ್ ಅನ್ನು ಪ್ರಧಾನಿ ನರೇಂದ್ರ ಮೋದಿ ಇಂದು ಉದ್ಘಾಟಿಸಿದರು.

ಬಳಿಕ ಮಾತನಾಡಿದ ಪ್ರಧಾನಿ, ಸಾಮಾಜಿಕ ನ್ಯಾಯದ ಪ್ರಮುಖ ಸಾಧನವೆಂದರೆ ದೇಶದ ಸಮತೋಲಿತ ಅಭಿವೃದ್ಧಿ ಎಲ್ಲರಿಗೂ ಸೌಲಭ್ಯಗಳು ಮತ್ತು ಎಲ್ಲರಿಗೂ ಸಮೃದ್ಧಿ ಎಂಬ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಪ್ರತಿಪಾದನೆಯಂತೆ ಕೇಂದ್ರ ಸರ್ಕಾರ ಕಾರ್ಯ ನಿರ್ವಹಿಸುತ್ತಿದೆ ಎಂದು ಹೇಳಿದರು.

ಬಾಬಾ ಸಾಹೇಬ್ ಅವರ ಜೀವನ ಬಡವರಿಗೆ, ವಂಚಿತರಿಗೆ ಮತ್ತು ಶೋಷಿತರಿಗೆ ನ್ಯಾಯಯುತ ವ್ಯವಸ್ಥೆಗಳನ್ನು ಒದಗಿಸಲು ಸಮರ್ಪಿತವಾಗಿತ್ತು. ಕೇಂದ್ರ ಸರ್ಕಾರ ಪ್ರತಿಯೊಬ್ಬರಿಗೂ ಸಾಮಾಜಿಕ ನ್ಯಾಯ ಒದಗಿಸಲು ಶ್ರಮಿಸುತ್ತಿದೆ ಎಂದರು.

ಕಳೆದೊಂದು ದಶಕದಲ್ಲಿ ಕೇಂದ್ರ ಸರ್ಕಾರ ತೆಗೆದುಕೊಂಡ ನೀತಿಗಳು ಮತ್ತು ನಿರ್ಧಾರಗಳು ಸಂವಿಧಾನದ ಘನತೆಯನ್ನು ಪುನಃಸ್ಥಾಪಿಸುವತ್ತ ಕೆಲಸ ಮಾಡಿವೆ. ಭಾರತೀಯ ಸಂವಿಧಾನದ 370ನೇ ವಿಧಿಯನ್ನು ರದ್ದುಪಡಿಸಿದ ನಂತರ, ಭಾರತದ ಸಂವಿಧಾನವು ಈಗ ಇಡೀ ರಾಷ್ಟ್ರಕ್ಕೆ ಸಂಪೂರ್ಣವಾಗಿ ಅನ್ವಯಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

2047ರ ವೇಳೆಗೆ ವಿಕಸಿತ ಭಾರತ ಗುರಿಯನ್ನು ಸಾಧಿಸುವಲ್ಲಿ ನಾರಿ ಶಕ್ತಿ ಕೊಡುಗೆ ಅಪಾರವಾಗಿದೆ. ಈ ಹಿನ್ನೆಲೆಯಲ್ಲಿ, ಇದೇ 16ರಿಂದ ನಾರಿಶಕ್ತಿ ವಂದನಾ ಅಧಿನಿಯಮಕ್ಕೆ ಸಂಬಂಧಿಸಿದಂತೆ ಸಾಂವಿಧಾನಿಕ ತಿದ್ದುಪಡಿ ಕುರಿತು ಚರ್ಚೆ ನಡೆಸಲಾಗುವುದು. ಈ ಸಂಬಂಧ ಈಗಾಗಲೇ ಭಾರತದ ನಾರಿಶಕ್ತಿಗೆ ಪತ್ರ ಬರೆಯಲಾಗಿದ್ದು, ಪ್ರತಿಯೊಬ್ಬ ಮಹಿಳೆಯರೂ ಇದನ್ನು ಗಮನಿಸಬೇಕು ಎಂದು ತಿಳಿಸಿದರು.

ದೇಶದ ಶಾಸನ ಸಭೆಗಳಲ್ಲಿ ಮಹಿಳೆಯರ ಧ್ವನಿ ಮತ್ತಷ್ಟು ಬಲಗೊಳ್ಳಲಿದೆ. ಆ ಮೂಲಕ ಪ್ರಜಾಪ್ರಭುತ್ವದ ಧ್ವನಿಯೂ ಸದೃಢವಾಗಲಿದೆ. ಶಾಸನ ಸಭೆಗಳಲ್ಲಿ ಮಹಿಳೆಯರ ಮೀಸಲಾತಿಯನ್ನು ಆದಷ್ಟು ಶೀಘ್ರ ಜಾರಿಗೊಳಿಸಲು ಎಲ್ಲರೂ ಉತ್ಸಾಹದಿಂದ ಕಾರ್ಯಪ್ರವೃತ್ತವಾಗಬೇಕು ಎಂದು ಅವರು ಮನವಿ ಮಾಡಿದರು.

ನಂತರ ಪ್ರಧಾನಿ, ದೆಹಲಿ–ಡೆಹ್ರಾಡೂನ್ ಆರ್ಥಿಕ ಕಾರಿಡಾರ್‌ನ ಎಲಿವೇಟೆಡ್ ವಿಭಾಗದಲ್ಲಿ ವನ್ಯಜೀವಿ ಕಾರಿಡಾರ್ ಅನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಕೇಂದ್ರ ಸಚಿವ ನಿತಿನ್ ಗಡ್ಕರಿ, ಉತ್ತರ ಪ್ರದೇಶದ ರಾಜ್ಯಪಾಲರಾದ ಆನಂದಿ ಬೆನ್ ಪಟೇಲ್, ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ಉಪಸ್ಥಿತರಿದ್ದರು. ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಅವರು, ಉತ್ತರ ಪ್ರದೇಶದ ಸಹಾರನಪುರದಲ್ಲಿ ರೋಡ್ ಶೋ ನಡೆಸಿದರು.

***************

ನಾರಿಶಕ್ತಿ ವಂದನಾ ಅಧಿನಿಯಮದೊಂದಿಗೆ ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇಕಡ 33 ರಷ್ಟು ಮೀಸಲಾತಿ ಖಚಿತಪಡಿಸಿಕೊಳ್ಳಲಾಗುವುದು ಎಂದು ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಖಾತೆ ರಾಜ್ಯ ಸಚಿವೆ ರಕ್ಷಾ ಖಡ್ಸೆ ಹೇಳಿದ್ದಾರೆ.

ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗ್ರಾಮ ಪಂಚಾಯಿತಿಗಳಿಂದ ಹಿಡಿದು ಪುರಸಭೆ ಮತ್ತು ನಿಗಮ ಮಂಡಳಿಗಳವರೆಗೆ ವಿವಿಧ ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಈಗಾಗಲೇ ಶೇಕಡ 50 ರಷ್ಟು ಮೀಸಲಾತಿ ಇದೆ. ಮಹಿಳೆಯರು ಈ ಸಂಸ್ಥೆಗಳಲ್ಲಿ ಸಕ್ರಿಯವಾಗಿ ಕೆಲಸ ಮಾಡುತ್ತಿದ್ದಾರೆ ಎಂದರು.

ಅನೇಕರು ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ನಾಯಕತ್ವದ ಹುದ್ದೆಗಳಿಗೆ ಮುನ್ನಡೆಯಲು ಸಮರ್ಥರಾಗಿದ್ದಾರೆ. ಕೇಂದ್ರ ಸರ್ಕಾರದ ನಾರಿಶಕ್ತಿ ವಂದನಾ ಅಧಿನಿಯಮ, ದೇಶದ ಭವಿಷ್ಯ ರೂಪಿಸುವಲ್ಲಿ ನಿರ್ಣಾಯಕ ಪಾತ್ರವಹಿಸುತ್ತದೆ ಎಂದು ಸಚಿವೆ ರಕ್ಷಾ ಖಡ್ಸೆ ಹೇಳಿದರು.

***************

ಭಾರತದ ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತಿಯ ಅಂಗವಾಗಿ ಇಂದು ದೇಶಾದ್ಯಂತ ಅವರಿಗೆ ಗೌರವ ನಮನ ಸಲ್ಲಿಸಲಾಯಿತು. ಅಂಬೇಡ್ಕರ್ ಅವರ ಜನ್ಮದಿನದಂದು ಗುಜರಾತ್‌ನ ಗಾಂಧಿನಗರದ ಲೋಕಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಬಾಬಾಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಲೋಕಸಭಾಧ್ಯಕ್ಷ ಓಂ ಬಿರ್ಲಾ, ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ಕೇಂದ್ರ ಸಚಿವ ಅಮಿತ್ ಶಾ ಸೇರಿದಂತೆ ಸಚಿವರು ಮತ್ತು ಸಂಸದರು ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ಗೌರವ ನಮನ ಸಲ್ಲಿಸಿದರು.

ಡಾ.ಅಂಬೇಡ್ಕರ್ ಅವರು ಶ್ರೇಷ್ಠ ನ್ಯಾಯಶಾಸ್ತ್ರಜ್ಞ, ಅರ್ಥಶಾಸ್ತ್ರಜ್ಞ, ಪ್ರಖರ ಚಿಂತಕ ಮತ್ತು ಸಮಸಮಾಜದ ಪ್ರಬಲ ಪ್ರತಿಪಾದಕರಾಗಿದ್ದರು. ಸಮಾಜದ ವಂಚಿತ ಮತ್ತು ದುರ್ಬಲ ವರ್ಗಗಳ ಏಳಿಗೆಗಾಗಿ ಅವರು ತಮ್ಮ ಜೀವನವನ್ನೇ ಮುಡಿಪಾಗಿಟ್ಟಿದ್ದರು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಸ್ಮರಿಸಿದ್ದಾರೆ.

ರಾಷ್ಟ್ರ ನಿರ್ಮಾಣದ ನಿಟ್ಟಿನಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ನೀಡಿದ ಕೊಡುಗೆಗಳು ಮತ್ತು ಅವರ ಪ್ರಯತ್ನಗಳು ಸ್ಫೂರ್ತಿದಾಯಕವಾಗಿವೆ. ಅವರ ಜೀವನ ಮತ್ತು ಕಾರ್ಯಗಳು ನ್ಯಾಯಸಮ್ಮತ ಹಾಗೂ ಪ್ರಗತಿಪರ ಸಮಾಜ ನಿರ್ಮಿಸಲು ಇಂದಿನ ತಲೆಮಾರಿಗೆ ದಾರಿದೀಪವಾಗಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

***************

ಸಾಮರಸ್ಯ ಭಾರತದ ಹಾದಿ, ಸಾಮರಸ್ಯದ ಹಳ್ಳಿಗಳಿಂದ ಪ್ರಾರಂಭವಾಗುತ್ತದೆ. ಹಳ್ಳಿಗಳು ರಾಷ್ಟ್ರದ ಆತ್ಮ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.

ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಅಂಗವಾಗಿ ಗುಜರಾತ್‌ನ ಗಾಂಧಿ ನಗರದಲ್ಲಿ ಇಂದು ನಡೆದ 'ಸಾಮಾಜಿಕ ಸಾಮರಸ್ಯ ಮಹೋತ್ಸವ'ದಲ್ಲಿ ಮಾತನಾಡಿದ ಅವರು, ರಾಷ್ಟ್ರದ ಒಟ್ಟಾರೆ ಅಭಿವೃದ್ಧಿಯನ್ನು ಖಚಿತಪಡಿಸಿಕೊಳ್ಳಲು ಜಾತಿ ಮತ್ತು ಧರ್ಮದ ಅಡೆ–ತಡೆಗಳನ್ನು ಮೀರಿ ಎದ್ದು ನಿಲ್ಲಬೇಕು. ಈ ಮೂಲಕ ರಾಷ್ಟ್ರೀಯ ಏಕತೆ ಸ್ಥಾಪಿಸಬೇಕು ಎಂದರು.

ಹಿಂದುಳಿದ ವರ್ಗಗಳ ಮಕ್ಕಳಿಗೆ ಗುಣಮಟ್ಟದ ಶಿಕ್ಷಣವನ್ನು ಒದಗಿಸುವುದು ನಮ್ಮ ಸಾಮೂಹಿಕ ಜವಾಬ್ದಾರಿಯಾಗಿದೆ. ಭಾರತದ ಸಾಂಸ್ಕೃತಿಕ ಏಕತೆ ಸಹಾನುಭೂತಿಯಲ್ಲಿ ಬೇರೂರಿದೆ ಮತ್ತು ಸಾಮಾಜಿಕ ಸಾಮರಸ್ಯವು ಎಲ್ಲರನ್ನೂ ಒಳಗೊಳ್ಳುವ ಬೆಳವಣಿಗೆಗೆ ಅತ್ಯಗತ್ಯ ಎಂದು ಅವರು ಪ್ರತಿಪಾದಿಸಿದರು.

ಎಲ್ಲಾ ನಾಗರಿಕರಿಗೆ ಸ್ಥಾನಮಾನ ಮತ್ತು ಅವಕಾಶಗಳ ಸಮಾನತೆ ನಮ್ಮ ಸಂವಿಧಾನದ ಗುರಿಯಾಗಿದೆ. ಸಂವಿಧಾನದಲ್ಲಿರುವ ಅನೇಕ ಸಮಾನತಾ ನಿಬಂಧನೆಗಳು ಸಾಮರಸ್ಯದ ಸಮಾಜವನ್ನು ನಿರ್ಮಿಸಲು ಸಾಂವಿಧಾನಿಕ ಆಧಾರವನ್ನು ಒದಗಿಸಿವೆ. ಇದರಂತೆ ನಾವು ನಡೆದುಕೊಳ್ಳಬೇಕಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಸಲಹೆ ನೀಡಿದರು.

***************

ತಮಿಳುನಾಡು ರಾಜಧಾನಿ ಚೆನ್ನೈನಲ್ಲಿ ಇಂದು ಕೇಂದ್ರ ಸಚಿವ ಜೆ.ಪಿ.ನಡ್ಡಾ ಅವರು ಬಿಜೆಪಿ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದರು.

ಎನ್‌ಡಿಎ ಅಧಿಕಾರಕ್ಕೆ ಬಂದರೆ, ಪ್ರತಿ ಕುಟುಂಬಕ್ಕೆ 10 ಸಾವಿರ ರೂಪಾಯಿ, ಮಹಿಳೆಯರಿಗೆ ಪ್ರತಿ ತಿಂಗಳು ಎರಡು ಸಾವಿರ ರೂಪಾಯಿ ಮತ್ತು ವಾರ್ಷಿಕವಾಗಿ ಮೂರು ಅನಿಲ ಸಿಲಿಂಡರ್‌ಗಳನ್ನು ಉಚಿತವಾಗಿ ನೀಡಲಾಗುವುದು ಎಂದು ಅವರು ಭರವಸೆ ನೀಡಿದರು.

ಅಲ್ಲದೇ, ಮುರುಗನ್ ದೇವರನ್ನು ಆರಾಧಿಸುವ ಥೈ ಪೂಸಂ ಹಬ್ಬವನ್ನು ನಾಡ ಹಬ್ಬವಾಗಿ ಆಚರಿಸಲಾಗುವುದು, ದೀಪಾಥೂನ್‌ನಲ್ಲಿ ದೀಪ ಬೆಳಗಿಸಲಾಗುವುದು, ಮಾದಕ ವಸ್ತು ಸಂಬಂಧಿತ ಸಮಸ್ಯೆಗಳನ್ನು ಪರಿಹರಿಸಲಾಗುವುದು, ತರಕಾರಿಗಳಿಗೆ ಕನಿಷ್ಠ ಬೆಂಬಲ ಬೆಲೆ, ಮಹಿಳಾ ಎಂಎಸ್‌ಎಂಇ ಗಳಿಗೆ ಉತ್ಪಾದಕರಾಗಿ ಬೆಳೆಯಲು 50 ಲಕ್ಷ ರೂಪಾಯಿ ಬಡ್ಡಿರಹಿತ ಸಾಲ ಸೌಲಭ್ಯ ಹಾಗೂ ಮೊದಲ ಬಾರಿ ಉತ್ತೀರ್ಣ ಹೊಂದಿದ ಪದವೀಧರರಿಗೆ 10 ಲಕ್ಷ ರೂಪಾಯಿ ಸಹಾಯಧನ ನೀಡಲಾಗುವುದು ಎಂದು ಅವರು ತಿಳಿಸಿದರು.

***************

ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್–ಐಪಿಎಲ್ ಟಿ–20 ಕ್ರಿಕೆಟ್ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ಕೊಲ್ಕತ್ತಾ ನೈಟ್ ರೈಡರ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಕೊಲ್ಕತ್ತಾ ನೈಟ್ ರೈಡರ್ಸ್, ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಇತ್ತೀಚಿನ ವರದಿ ಬಂದಾಗ ಚೆನ್ನೈ ಸೂಪರ್ ಕಿಂಗ್ಸ್ 1 ವಿಕೆಟ್ ನಷ್ಟಕ್ಕೆ 26 ರನ್ ಗಳಿಸಿ ಆಡುತ್ತಿದೆ.

*******ಮುಕ್ತಾಯ********